## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.422/2020

ಸಾಕ್ಷಿದಾರರ ಹೇಳಿಕೆಃ

| | | |
|---|---|---|
| ಹೆಸರು | : ಸಿದ್ದರಾಮಪ್ಪ | CW: 11 PW: 8 |
| ತಂದೆಯ ಹೆಸರು | : ಲೇಟ್ ರಂಗಪ್ಪ | |
| ವಯಸ್ಸು | : 72 | |
| ವೃತ್ತಿ | : ನಿವೃತ್ತ ಎಎಸ್ ಐ | |
| ವಾಸಸ್ಥಳ | : ಶಿವಮೊಗ್ಗ | |

ದಂಡ ಪ್ರಕ್ರಿಯಾ ಸಂಹಿತೆಯ ಕಲಂ 299 ರಡಿಯಲ್ಲಿ ಸಾಕ್ಷ್ಯವಿಚಾರಣೆ

ದಿನಾಂಕಃ 16.07.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

1998 ರಿಂದ 2005 ರವರೆಗೆ ನ್ಯಾಮತಿ ಪೋಲೀಸ್ ಠಾಣೆಯಲ್ಲಿ ಹೆಚ್ ಸಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣದ ಆರೋಪಿಗಳ ಪತ್ತೆಗಾಗಿ ನನ್ನನ್ನು ಮತ್ತು ಚಾಸಾ 10 ರವರನ್ನು ಚಾಸಾ 16 ರವರು ನೇಮಿಸಿದ್ದು, ನಾವು ಎಲ್ಲಾ ಕಡೆ ಹುಡುಕಾಡಿ ದಿಃ 27.03.2004 ರಂದು ಬೆಳಗ್ಗೆ 7 ಗಂಟೆ ಸಮಯದಲ್ಲಿ ಶಿವಮೊಗ್ಗದ ಮಹಂತೇಶ್ವರ ಟ್ರಾನ್ಸ್ ಪೋರ್ಟ್ ಹತ್ತಿರ ವಿಚಾರಿಸುತ್ತಿದ್ದಾಗ ಆರೋಪಿಗಳಿಬ್ಬರೂ ಸದರಿ ಲಾರಿಯ ಮಾಲೀಕರ ಹತ್ತಿರ ಅದರ ವಿಚಾರವಾಗಿ ಮಾತನಾಡುತ್ತಾ ಇದ್ದಾಗ ನಮಗೆ ಅನುಮಾನ ಬಂದು ಅವರಿಬ್ಬರನ್ನು

ಪೋಲೀಸ್ ಠಾಣೆಗೆ ಕರೆದುಕೊಂಡು ಹೋಗಿ ಚಾಸಾ 13 ರವರ ಮುಂದೆ ಹಾಜರುಪಡಿಸಿ ವರದಿ ನೀಡಿರುತ್ತೇವೆ.

ಸಾಕ್ಷಿಯು ತಾನು ನೀಡಿದ್ದೇನೆ ಎಂದು ಹೇಳಲಾದ ವರದಿಯ ದೃಢೀಕೃತ ನಕಲನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 5 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಃ ಆರೋಪಿಗಳು ತಲೆಮರಿಸಿಕೊಂಡಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.